Akashvani : Bangalore

Regional Bulletin In Kannada

ಆಕಾಶವಾಣಿ ಬೆಂಗಳೂರು

ಪ್ರದೇಶ ಸಮಾಚಾರ

18.03.2025 18.40 hrs

<><*<><>*><>

## <u>ಮುಖ್ಯಾಂಶಗಳು</u>

- ಗ್ಯಾರಂಟಿ ಯೋಜನೆಗಳಿಂದ ೪ ಕೋಟಿ ಜನರಿಗೆ ಪ್ರಯೋಜನ - ಮುಖ್ಯಮಂತ್ರಿ
- ರಾಜ್ಯ ಸರ್ಕಾರದಿಂದ ೫೮೯ ಕೋಟಿ ಬೆಳೆ ಸಾಲ ವಿತರಣೆ
- ಬೆಂಗಳೂರು-ಕೇಪ್‌ಟೌನ್ ನಡುವೆ ನೇರ ವಿಮಾನ ಸೇವೆ ಆರಂಭಿಸುವ ಪ್ರಸ್ತಾಪವಿದೆ - ಪ್ರಿಯಾಂಕ್ ಖರ್ಗೆ
- ಇದೇ ೨೧ ರಿಂದ ಏಪ್ರಿಲ್ ೪ರವರೆಗೆ ರಾಜ್ಯಾದ್ಯಂತ ಎಸ್‌ಎಸ್‌ಎಲ್‌ಸಿ ಪರೀಕ್ಷೆ

<><*<><>*><>

ಗ್ಯಾರಂಟಿ ಯೋಜನೆಗಳಿಂದ ಜನರ ಬದುಕು ಹಸನಾಗಿದೆ ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ವಿಧಾನಪರಿಷತ್‌ನಲ್ಲಿಂದು ತಿಳಿಸಿದ್ದಾರೆ. ಸದನದಲ್ಲಿಂದು ರಾಜ್ಯಪಾಲರ ಭಾಷಣ ವಂದನಾ ನಿರ್ಣಯದ ಚರ್ಚೆಗೆ ಉತ್ತರ ನೀಡಿದ ಅವರು, ಗ್ಯಾರಂಟಿ ಯೋಜನೆಗಳಿಗೆ ವಿಶ್ವಸಂಸ್ಥೆ ಮೆಚ್ಚುಗೆ ವ್ಯಕ್ತಪಡಿಸಿದೆ. ಆದರೆ ವಿರೋಧ ಪಕ್ಷಗಳು ಸರ್ಕಾರದ ಕ್ರಮವನ್ನು ಸಹಿಸಲಾಗದೆ, ಗ್ಯಾರಂಟಿ ಯೋಜನೆಗಳಿಂದ ಸರ್ಕಾರ ದಿವಾಳಿಯಾಗುತ್ತದೆ. ಅಭಿವೃದ್ಧಿ ಯೋಜನೆಗಳಿಗೆ ಹಣ ದೊರೆಯುವುದಿಲ್ಲ ಎಂದು ಅಪಪ್ರಚಾರ ಮಾಡಿವೆ. ಶಕ್ತಿ ಯೋಜನೆಯಡಿ ೪೮೯ ಕೋಟಿ ಜನ ಉಚಿತವಾಗಿ ಪ್ರಯಾಣ ಮಾಡಿದ್ದಾರೆ. ಇದು ಮಹಿಳೆಯರಿಗೆ ಸಾಮಾಜಿಕ ಮತ್ತು ಆರ್ಥಿಕವಾಗಿ ಶಕ್ತಿ ನೀಡಿದೆ. ೪ ಕೋಟಿಗೂ ಹೆಚ್ಚು ಜನ ಪ್ರಯೋಜನ ಪಡೆದಿದ್ದಾರೆ ಎಂದು ಮುಖ್ಯಮಂತ್ರಿ ಸಮರ್ಥಿಸಿಕೊಂಡರು.

<><*<><>*><>

ಶೂನ್ಯ ಬಡ್ಡಿದರದಲ್ಲಿ ವಿತರಿಸುವ ಬೆಳೆ ಸಾಲದ ಮಿತಿಯನ್ನು ಮೂರು ಲಕ್ಷದಿಂದ ೫ ಲಕ್ಷ ರೂಪಾಯಿಗೆ ಹೆಚ್ಚಿಸಲಾಗಿದೆ ಎಂದು ಸಹಕಾರ ಸಚಿವ ಕೆ.ಎನ್. ರಾಜಣ್ಣ ವಿಧಾನಪರಿಷತ್‌ಗೆ ಇಂದು ತಿಳಿಸಿದರು. ಪ್ರಶ್ನೋತ್ತರ ಅವಧಿಯಲ್ಲಿ ಉತ್ತರಿಸಿದ ಸಚಿವರು, ಪ್ರಸಕ್ತ ವರ್ಷದ ಫೆಬ್ರವರಿ ಅಂತ್ಯದ ವೇಳೆಗೆ ೫೮೯ ಕೋಟಿ ರೂಪಾಯಿ ಸಾಲ ವಿತರಿಸಲಾಗಿದೆ. ಪ್ರತಿವರ್ಷ ಹೊಸ ಸದಸ್ಯರು ಸಾಲಕ್ಕಾಗಿ ಅರ್ಜಿ ಸಲ್ಲಿಸುತ್ತಿದ್ದು, ಡಿಸಿಸಿ ಬ್ಯಾಂಕ್‌ಗಳು ಹೊಸ ರೈತರಿಗೆ ಪ್ರಥಮ ಆದ್ಯತೆ ನೀಡಿ, ೩ ಲಕ್ಷದವರೆಗೂ ಸಾಲ ವಿತರಿಸುತ್ತಿವೆ ಎಂದು ಅವರು ಸದನಕ್ಕೆ ಉತ್ತರಿಸಿದರು.

<><*<><>*><>

ಬೆಂಗಳೂರು ಹಾಗೂ ಕೇಪ್‌ಟೌನ್ ನಡುವೆ ನೇರ ವಿಮಾನ ಆರಂಭಿಸಲು ಕ್ರಮ ಕೈಗೊಳ್ಳಲಾಗುವುದು ಎಂದು ಐಟಿ-ಬಿಟಿ ಸಚಿವ ಪ್ರಿಯಾಂಕ್ ಖರ್ಗೆ ತಿಳಿಸಿದ್ದಾರೆ. ಕೇಪ್‌ಟೌನ್ ಪ್ರವಾಸೋದ್ಯಮ ಪ್ರತಿನಿಧಿಗಳ ಮಾತುಕತೆ ನಂತರ ಸಚಿವರು ಈ ವಿಷಯ ತಿಳಿಸಿದರು.  ಬೆಂಗಳೂರು ಹಾಗೂ ಕೇಪ್‌ಟೌನ್ ನಡುವೆ ನೇರ ವಿಮಾನಯಾನ ಸಂಪರ್ಕ ಆರಂಭಿಸುವುದು ಸೇರಿದಂತೆ ಆರ್ಥಿಕ ಅವಕಾಶಗಳನ್ನು ಸೃಷ್ಟಿಸುವ ಬಲವಾದ ಪಾಲುದಾರಿಕೆ ಹೊಂದುವುದು ಉಭಯ ದೇಶಗಳ ಉದ್ದೇಶವಾಗಿದೆ .ವ್ಯಾಪಾರ ವಹಿವಾಟು

ಸುಗಮಗೊಳಿಸಲು ಪ್ರಯತ್ನಗಳನ್ನು ತೀವ್ರಗೊಳಿಸಲಾಗುವುದು ಎಂದು ಸಚಿವ ಪ್ರಿಯಾಂಕ ಖರ್ಗೆ ಹೇಳಿದರು.

<><*<><>*><>

ನೆಲಮಂಗಲ ಸಮೀಪದ ದಾಸನಪುರದಲ್ಲಿ ೩೦೬ ಕೋಟಿ ರೂಪಾಯಿ ವೆಚ್ಚದಲ್ಲಿ ಸುಸಜ್ಜಿತ ಕೃಷಿ ಉತ್ಪನ್ನ ಮಾರುಕಟ್ಟೆ ಸ್ಥಾಪಿಸಲಾಗಿದೆ ಎಂದು ಸಚಿವ ಶಿವಾನಂದ ಪಾಟೀಲ್ ವಿಧಾನಪರಿಷತ್ತಿಗೆ ಇಂದು ತಿಳಿಸಿದರು. ಪ್ರಶ್ನೋತ್ತರ ಅವಧಿಯಲ್ಲಿ ಉತ್ತರಿಸಿದ ಸಚಿವರು, ಸ್ವತಂತ್ರಮಾರುಕಟ್ಟೆ ಸಮಿತಿ ಸ್ಥಾಪನೆಗೆ ಸಂಬಂಧಪಟ್ಟಂತೆ ಬರುವ ಬೇಡಿಕೆಗಳನ್ನು ಕುರಿತು ಆರ್ಥಿಕ ಸಮೀಕ್ಷೆ ನಡೆಸಿದ ನಂತರ ಸೂಕ್ತ ಕ್ರಮ ಕೈಗೊಳ್ಳಲಾಗುವುದು. ರಾಜ್ಯದಲ್ಲಿ ಪ್ರಸ್ತುತ ೧೬೧ ಕೃಷಿ ಉತ್ಪನ್ನ ಮಾರುಕಟ್ಟೆ ಸಮಿತಿಗಳು ಹಾಗೂ ೪೧೦ ಉಪ ಮಾರುಕಟ್ಟೆಗಳು ಕಾರ್ಯ ನಿರ್ವಹಿಸುತ್ತಿವೆ. ಬೆಂಗಳೂರಿನ ಯಶವಂತಪುರ, ಎಪಿಎಂಸಿ ಮಾರುಕಟ್ಟೆಯಲ್ಲಿ ವಾಹನದಟ್ಟಣೆ ದಿನೇ ದಿನೇ ಹೆಚ್ಚಾಗುತ್ತಿರುವ ಹಿನ್ನೆಲೆಯಲ್ಲಿ ನೆಲಮಂಗಲ ಸಮೀಪದ ದಾಸನಪುರದಲ್ಲಿ ೩೦೬ ಕೋಟಿ ರೂಪಾಯಿ ವೆಚ್ಚದಲ್ಲಿ ವಿಶಾಲ ಮಾರುಕಟ್ಟೆ ಅಭಿವೃದ್ಧಿಪಡಿಸಲಾಗಿದೆ. ಎಪಿಎಂಸಿಗಳನ್ನು ಹೊರತುಪಡಿಸಿ ರೈತರು ತಮ್ಮ ಕೃಷಿ ಉತ್ಪನ್ನಗಳನ್ನು ಮಾರಾಟ ಮಾಡಲು ಕಾಯ್ದೆಯಡಿ ಅವಕಾಶ ಕಲ್ಪಿಸಿ ೪ ಖಾಸಗಿ ಮಾರುಕಟ್ಟೆ ಹಾಗೂ ೬೫ ನೇರ ಖರೀದಿ ಕೇಂದ್ರಗಳನ್ನು ಆರಂಭಿಸಲು ಅನುಮತಿ ನೀಡಲಾಗಿದೆ. ಯಶವಂತಪುರ ಮಾರುಕಟ್ಟೆಯಿಂದ ಈರುಳ್ಳಿ, ಬೆಳ್ಳುಳ್ಳಿ, ಆಲೂಗಡ್ಡೆ ಮತ್ತು ಶುಂಠಿ ೪ ಉತ್ಪನ್ನಗಳನ್ನು ದಾಸನಪುರ ಉಪಮಾರುಕಟ್ಟೆಗೆ ಸ್ಥಳಾಂತರಿಸಲಾಗುವುದು ಎಂದು ಸಚಿವರು ಸ್ಪಷ್ಟಪಡಿಸಿದರು.

<><*<><>*><>

ರಾಜ್ಯದಲ್ಲಿ ಕಾನೂನು ಸುವ್ಯವಸ್ಥೆ ಹದಗೆಟ್ಟಿದೆ ಎಂದು ವಿಧಾನಸಭೆಯ ವಿರೋಧ ಪಕ್ಷದ ನಾಯಕ ಆರ್. ಅಶೋಕ, ವಿಧಾನಸಭೆಯಲ್ಲಿಂದು ಆರೋಪಿಸಿದ್ದಾರೆ. ನಿಯಮ ೬೯ ರಡಿ ಸದನದಲ್ಲಿ ಈ ವಿಷಯ ಪ್ರಸ್ತಾಪಿಸಿದ ಅವರು, ಬಿಡದಿ ಬಳಿ ಪಾಕಿಸ್ತಾನ ಜಿಂದಾಬಾದ್ ಎಂಬ ಘೋಷಣೆಗಳನ್ನು ಕೆಲವು ಕಿಡಿಗೇಡಿಗಳು ಬರೆದಿದ್ದಾರೆ. ಕೆಲವು ಕಡೆ ಕನ್ನಡಿಗರನ್ನು ಅವಮಾನಿಸುವ ಬರಹಗಳನ್ನು ಬಳಸಲಾಗಿದೆ. ಇದಕ್ಕೆ ಕಾರಣರಾದವರ ವಿರುದ್ಧ ಸರ್ಕಾರ ಯಾವುದೇ ಕ್ರಮ ಕೈಗೊಂಡಿಲ್ಲ ಎಂದು ಬೇಸರ ವ್ಯಕ್ತಪಡಿಸಿದರು. ಸಿಸಿ ಟಿವಿಗಳ ಸಹಾಯದಿಂದ ಆರೋಪಿಗಳು ಮತ್ತು ಕಿಡಿಗೇಡಿಗಳನ್ನು ಪತ್ತೆಹಚ್ಚಿ ಕಾನೂನು ಕ್ರಮ ಕೈಗೊಳ್ಳಲು ಸರ್ಕಾರಕ್ಕೆ ಏನು ತೊಂದರೆ ಎಂದು ಅವರು ಪ್ರಶ್ನಿಸಿದರು. ಮತ್ತೊಬ್ಬ ಶಾಸಕ ಸುನೀಲ್ ಕುಮಾರ್ ವಿಷಯ ಪ್ರಸ್ತಾಪಿಸುತ್ತ, ರಾಜ್ಯಕ್ಕೆ ಭೇಟಿ ನೀಡುವ ವಿದೇಶಿಯರ ಮೇಲೆ ಹಲ್ಲೆ, ದೌರ್ಜನ್ಯ ನಡೆಯುತ್ತಿದೆ. ಇದರಿಂದ ಕೆಟ್ಟ ಹೆಸರು ಬರುತ್ತಿದೆ ಎಂದು ಆತಂಕ ವ್ಯಕ್ತಪಡಿಸಿದರು.

<><*<><>*><>

ವಿಶ್ವ ವಿಖ್ಯಾತ ಕರಗ ಶಕ್ತ್ಯೋತ್ಸವ ಆಚರಣೆಗೆ ಅಗತ್ಯ ಸಿದ್ಧತೆ ಮಾಡಿಕೊಳ್ಳುವಂತೆ ಆಡಳಿತ ವಿಭಾಗದ ವಿಶೇಷ ಆಯುಕ್ತ ಅವಿನಾಶ್ ಮೆನನ್ ರಾಜೇಂದ್ರನ್ ಅಧಿಕಾರಿಗಳಿಗೆ ಸೂಚನೆ ನೀಡಿದ್ದಾರೆ. ಕರಗ ಆಚರಣೆಗೆ ಸಂಬಂಧಪಟ್ಟಂತೆ ಮಹಾನಗರ ಪಾಲಿಕೆಯಲ್ಲಿ ಇಂದು ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಕರಗ ನಡೆಯುವ ವೇಳೆಗೆ ಧರ್ಮರಾಯಸ್ವಾಮಿ ದೇವಸ್ಥಾನದ ಸುತ್ತಮುತ್ತಲಿನ ರಸ್ತೆ ದುರಸ್ತಿ ಕಾಮಗಾರಿಗಳನ್ನು ಪೂರ್ಣಗೊಳಿಸಬೇಕು ಎಂದು ಹೇಳಿದರು. ಕರಗ ಮಹೋತ್ಸವ ಏಪ್ರಿಲ್ ೪ ರಿಂದ ೧೪ವರೆಗೆ ನಡೆಯಲಿದೆ. ಈ ಸಂದರ್ಭದಲ್ಲಿ ಬೆಂಗಳೂರು ನಗರಕ್ಕೆ ಬರುವ ಯಾತ್ರಿಕರಿಗೆ ಕುಡಿಯುವ ನೀರು ಮತ್ತು ಶೌಚಾಲಯದ ವ್ಯವಸ್ಥೆ ಮಾಡಬೇಕು ಎಂದರು.

<><*<><>*><>

ಸಚಿವರು ಸದನಕ್ಕೆ ಗೈರು ಹಾಜರಾಗುವುದನ್ನು ಇನ್ನು ಮುಂದೆ ಸಹಿಸಲಾಗುವುದಿಲ್ಲ ಎಂದು ವಿಧಾನಸಭಾ ಅಧ್ಯಕ್ಷ ಯು.ಟಿ. ಖಾದರ್ ಅಸಮಾಧಾನ ಹೊರ ಹಾಕಿದ್ದಾರೆ. ವಿರೋಧಪಕ್ಷದ ನಾಯಕ ಆರ್. ಅಶೋಕ ಕಾನೂನು ಸುವ್ಯವಸ್ಥೆ ಕುರಿತು ವಿಧಾನಸಭೆಯಲ್ಲಿ ಮಾತನಾಡುತ್ತಾ, ಸದನದಲ್ಲಿ ಸಚಿವರಿಲ್ಲ. ಸರ್ಕಾರ ಮತ್ತು ಮಂತ್ರಿಗಳು ಇದನ್ನು ಗಂಭೀರವಾಗಿ ಪರಿಗಣಿಸುತ್ತಿಲ್ಲ ಎಂದು ಹೇಳಿದರು. ಆ ಸಂದರ್ಭದಲ್ಲಿ ಸಭಾಧ್ಯಕ್ಷ ಯು.ಟಿ. ಖಾದರ್ ಮಧ್ಯಪ್ರವೇಶ ಮಾಡಿ, ಮಂತ್ರಿಗಳು ಸದನದಲ್ಲಿ ಕಡ್ಡಾಯವಾಗಿ ಹಾಜರಿರಬೇಕು. ಸದನಕ್ಕೆ ಗೈರು ಹಾಜರಾಗುವುದನ್ನು ಯಾವುದೇ ಕಾರಣಕ್ಕೂ ಸಹಿಸುವುದಿಲ್ಲ ಎಂದು ಎಚ್ಚರಿಕೆ ನೀಡಿದರು. ಸದನದಲ್ಲಿ ಹಾಜರಿರಬೇಕಾದ ಸಚಿವರ ಪಟ್ಟಿಯನ್ನು ಸಭಾಧ್ಯಕ್ಷರು ಸದನಕ್ಕೆ ಓದಿ ಹೇಳಿದರು. ಶಾಸಕರಾದ ರಾಜು ಕಾಗೆ, ಬಸವರಾಜ ಮತ್ತಿಮೋಡ್ ಅವರಿಗೆ ಅಧಿಕಾರಿಗಳಿಂದ ಅಪಮಾನವಾಗಿರುವ ವಿಚಾರವನ್ನು ಹಕ್ಕು ಬಾಧ್ಯತಾ ಸಮಿತಿಗೆ ವರ್ಗಾಯಿಸುವುದಾಗಿ ವಿಧಾನಸಭಾಧ್ಯಕ್ಷ ಯು.ಟಿ. ಖಾದರ್ ತಿಳಿಸಿದ್ದಾರೆ. ಇಬ್ಬರು ಶಾಸಕರು ತಮಗೆ ಆಗಿರುವ ಅಪಮಾನಕ್ಕೆ ಕಾರಣರಾದ ಅಧಿಕಾರಿಗಳ ವಿರುದ್ಧ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಆಗ್ರಹಿಸಿದರು. ಇದಕ್ಕೆ ಪಕ್ಷಭೇದ ಮರೆತು ಎಲ್ಲ ಸದಸ್ಯರು ಧ್ವನಿಗೂಡಿಸಿದರು. ಶಾಸಕರಿಗೆ ಅಪಮಾನ ಮಾಡಿದ ಅಧಿಕಾರಿಗಳ ವಿರುದ್ಧ ಸೂಕ್ತಕ್ರಮ ಜರುಗಿಸಬೇಕೆಂದು ಒತ್ತಾಯಿಸಿದರು.

<><*<><>*><>

ರಾಜ್ಯಾದ್ಯಂತ ಇದೇ ೨೧ ರಿಂದ ಏಪ್ರಿಲ್ ೪ರವರೆಗೆ ಎಸ್.ಎಸ್.ಎಲ್.ಸಿ. ಪರೀಕ್ಷೆ ನಡೆಯಲಿದೆ. ಇದಕ್ಕಾಗಿ ಎಲ್ಲ ಜಿಲ್ಲೆಗಳಲ್ಲಿ ಸಕಲ ಸಿದ್ಧತೆ ಪೂರ್ಣಗೊಂಡಿದೆ.  ಕೋಲಾರ ಜಿಲ್ಲೆಯಲ್ಲಿ ಪ್ರಸ್ತುತ ೨೧ ಸಾವಿರದ ೭೫ ವಿದ್ಯಾರ್ಥಿಗಳು ೭೫ ಪರೀಕ್ಷಾ ಕೇಂದ್ರಗಳಲ್ಲಿ ಪರೀಕ್ಷೆ ಬರೆಯಲಿದ್ದಾರೆ ಎಂದು ಜಿಲ್ಲಾಧಿಕಾರಿ ಡಾ.ಎಂ.ಆರ್. ರವಿ ತಿಳಿಸಿದ್ದಾರೆ. ಕಾರವಾರದಲ್ಲಿಂದು ಜಿಲ್ಲಾಧಿಕಾರಿ ಕೆ. ಲಕ್ಷ್ಮೀಪ್ರಿಯ ಮಾತನಾಡಿ, ವಿದ್ಯಾರ್ಥಿಗಳು ಯಾವುದೇ ಆತಂಕಕ್ಕೆ ಒಳಗಾಗದೇ ಆತ್ಮವಿಶ್ವಾಸದಿಂದ ಪರೀಕ್ಷೆ ಬರೆಯಬೇಕೆಂದು ಕಿವಿಮಾತು ಹೇಳಿದರು. ಅವರು ಕಾರವಾರ ತಾಲೂಕಿನ ಶಿರವಾಡದ ಪ್ರೌಢಶಾಲೆಗೆ ಭೇಟಿ ನೀಡಿ, ಎಸ್.ಎಸ್.ಎಲ್.ಸಿ ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿದರು. ಬೆಂಗಳೂರು ಗ್ರಾಮಾಂತರ ಜಿಲ್ಲೆಯಲ್ಲಿ ಪರೀಕ್ಷೆಗಾಗಿ ಅಗತ್ಯ ಸಿದ್ಧತೆ ಮಾಡಿಕೊಳ್ಳಲಾಗಿದೆ ಎಂದು ಜಿಲ್ಲಾಧಿಕಾರಿ ಎ.ಬಿ.ಬಸವರಾಜು ತಿಳಿಸಿದ್ದಾರೆ. ಜಿಲ್ಲಾಡಳಿತ ಭವನದ ಸಭಾಂಗಣದಲ್ಲಿ ನಡೆದ ಪೂರ್ವಭಾವಿ ಸಭೆಯಲ್ಲಿ ಮಾತನಾಡಿದ ಅವರು, ಎಸ್.ಎಸ್.ಎಲ್.ಸಿ ಪರೀಕ್ಷೆಯ ಫಲಿತಾಂಶ ಉತ್ತಮಪಡಿಸುವ ನಿಟ್ಟಿನಲ್ಲಿ ಅಧಿಕಾರಿಗಳೊಂದಿಗೆ ಪರಾಮರ್ಶೆ ಮಾಡಲಾಗಿದೆ ಎಂದು ಅವರು ಹೇಳಿದರು.

<><*<><>*><>

ಪುಸ್ತಕದ ಬಗ್ಗೆ ಕಾಳಜಿ ಇರುವವರು ಜೀವನದಲ್ಲಿ ಮಹತ್ತರ ಸಾಧನೆ ಮಾಡಲು ಸಾಧ್ಯವಾಗಲಿದೆ ಎಂದು ಮಂಡ್ಯ ಜಿಲ್ಲಾಧಿಕಾರಿ ಡಾ. ಕುಮಾರ್ ಹೇಳಿದ್ದಾರೆ. ಮೈಸೂರಿನಲ್ಲಿ ಇಂದು ಜರುಗಿದ ಕಾರ್ಯಾಗಾರದಲ್ಲಿ ಅವರು ಮಾತನಾಡಿದರು. ಪ್ರತಿಯೊಬ್ಬರು ಪುಸ್ತಕ ಪ್ರೇಮಿಯಾಗಬೇಕು. ಹೆಚ್ಚು ಹೆಚ್ಚು ಪುಸ್ತಕ ಓದುವುದರಿಂದ ಜ್ಞಾನಾರ್ಜನೆ ವೃದ್ಧಿಯಾಗುತ್ತದೆ ಎಂದರು. ಜೀವನದಲ್ಲಿ ಯಶಸ್ವಿಯಾಗಬೇಕು ಮತ್ತು ಗುರಿ ಮುಟ್ಟಬೇಕು ಎನ್ನುವುದಾದರೇ ಪುಸ್ತಕದ ಬಗ್ಗೆ ಕಾಳಜಿ ಹೊಂದಿರಬೇಕು. ಕಾರ್ಯಕ್ರಮದಲ್ಲಿ ಕುಲಸಚಿವೆ ಎಂ.ಕೆ. ಸವಿತಾ ಮತ್ತಿತರರು ಹಾಜರಿದ್ದರು.

<><*<><>*><>

ವಿದೇಶಿ ವಿನಿಮಯ ನಿರ್ವಹಣಾ ಕಾಯ್ದೆ- ಫೆಮಾ ಉಲ್ಲಂಘನೆ ಆರೋಪದಲ್ಲಿ ಸರ್ಕಾರೇತರ ಸಂಸ್ಥೆಗಳು, ಸೊರೊಸ್ ಆರ್ಥಿಕ ಅಭಿವೃದ್ಧಿ ನಿಧಿ- ಇಡಿಎಫ್ ಮತ್ತು ಓಪನ್ ಸೊಸೈಟಿ ಫೌಂಡೇಷನ್- ಒ.ಎಸ್.ಎಫ್ ಗೆ ಸೇರಿದ ಬೆಂಗಳೂರಿನ ೮ ಸ್ಥಳಗಳಲ್ಲಿ ಜಾರಿ ನಿರ್ದೇಶನಾಲಯ- ಇಡಿ ಶೋಧ ಕಾರ್ಯ

ನಡೆಸುತ್ತಿದೆ. ೨೦೧೬ ರಲ್ಲಿ ಕೇಂದ್ರ ಗೃಹ ವ್ಯವಹಾರಗಳ ಸಚಿವಾಲಯವು, ಸೊರೊಸ್ ಓ.ಎಸ್.ಎಫ್ ಅನ್ನು ಪಿ.ಆರ್.ಸಿ ಅಡಿಯಲ್ಲಿ ಇರಿಸಿದೆ. ಇದರಿಂದಾಗಿ ಭಾರತದಲ್ಲಿರುವ ಎನ್.ಜಿ.ಒ ಗಳಿಗೆ ಅನಿಯಂತ್ರಿತ ದೇಣಿಗೆಯನ್ನು ನೀಡುವುದನ್ನು ನಿರ್ಬಂಧಿಸಲಾಗಿದೆ.

**<><*<><>*><>**

**ಸಂಕ್ಷಿಪ್ತ ಸುದ್ದಿಗಳು...**

೧. ಇದೇ ೨೨ ರಂದು ಕರ್ನಾಟಕ ಬಂದ್ ನಡೆಸುವುದಾಗಿ ಕನ್ನಡ ಚಳುವಳಿಯ ನಾಯಕ ವಾಟಲ್ ನಾಗರಾಜ್ ಬೆಂಗಳೂರಿನಲ್ಲಿಂದು ತಿಳಿಸಿದ್ದಾರೆ. ಬೆಳಗ್ಗೆ ೬ ರಿಂದ ಸಂಜೆ ೬ರವರೆಗೆ ಬಂದ್ ನಡೆಸಲಾಗುವುದು. ಟೌನ್‌ಹಾಲ್‌ನಿಂದ ಫ್ರೀಡಂ ಪಾರ್ಕ್‌ವರೆಗೆ ಪ್ರತಿಭಟನಾ ಮೆರವಣಿಗೆ ನಡೆಸಲಾಗುವುದು ಎಂದರು.

೨. ಆಧಾರ್‌ನೊಂದಿಗೆ ಮತದಾರರ ಗುರುತಿನ ಚೀಟಿ ಲಿಂಕ್ ಮಾಡುವ ಪ್ರಕ್ರಿಯೆ ಚುನಾವಣಾ ಆಯೋಗದಿಂದ ಸದ್ಯದಲ್ಲಿಯೇ ಪ್ರಾರಂಭವಾಗಲಿದೆ. ದೆಹಲಿಯಲ್ಲಿಂದು ನಡೆದ ಮುಖ್ಯ ಚುನಾವಣಾ ಆಯುಕ್ತ ಜ್ಞಾನೇಶ್ ಕುಮಾರ್ ನೇತೃತ್ವದ ಸಭೆಯಲ್ಲಿ ಈ ತೀರ್ಮಾನಕ್ಕೆ ಬರಲಾಗಿದೆ.

**<><*<> ಇಲ್ಲಿಗೆ ಪ್ರದೇಶ ಸಮಾಚಾರ ಮುಗಿಯಿತು <>*><>**

**<><*<> ನಮ್ಮ ಮುಂದಿನ ವಾರ್ತಾ ಪ್ರಸಾರ ರಾತ್ರಿ ೭.೩೫ ಕ್ಕೆ <>*><>**